ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಕೆ ಆರ್ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಸಾಕ್ಷಿಗೆ ನಿಪಿ-1 ದಾಖಲೆಯನ್ನು ತೋರಿಸಲಾಗಿ ಅದರಲ್ಲಿದ್ದ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಸದರಿ ದಾಖಲೆಗೆ ವಾದಿ ಮತ್ತು ಪ್ರತಿವಾದಿಗಳು ಮಾಡಿರುವ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲಾತಿಗೆ ನನ್ನ ಜೊತೆಯಲ್ಲಿ ಪ್ರಕಾಶ್ ಎಂಬುವವರು ಸಾಕ್ಷಿ ಸಹಿಯನ್ನು ಮತ್ತು ಭೈರಯ್ಯ ಎಂಬುವವರು ಕರಡುಪ್ರತಿ ರಚನಾಕಾರರು ಎಂದು ಸಹಿ ಮಾಡಿರುತ್ತಾರೆ.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಹಾಜರಿದ್ದು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.